# ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ

## ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 7168/ 2022

**ಚಾಸಾ ಃ- 07 / ಪ್ರಾಸಾ ಃ- 05**

| | |
|---|---|
| ಹೆಸರು | **ಡಾಃ ಯಶವಂತ್** |
| ತಂದೆಯ / ಗಂಡನ ಹೆಸರು | **ಡಾಃ ಹುಚ್ಚಯ್ಯ** |
| ವಯಸ್ಸು | **43** |
| ಉದ್ಯೋಗ | ವೈದ್ಯಾಧಿಕಾರಿ, ಸಾರ್ವಜನಿಕ ಆಸ್ಪತ್ರೆ ಮಾಗಡಿ |
| ವಿಳಾಸ | **ಬೆಂಗಳೂರು** |

**ದಿನಾಂಕಃ 29.09.2025 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ದಿನಾಂಕ 15.06.2019 ರಿಂದ ಇಲ್ಲಿಯವರೆಗೂ ಮಾಗಡಿ ಸರ್ಕಾರಿ ಆಸ್ಪತ್ರೆಯಲ್ಲಿ ಹಿರಿಯ ವೈದ್ಯಾಧಿಕಾರಿ ಎಂದು ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕಃ 28.08.2022 ರಂದು ಸುಮಾರು ಮಧ್ಯಾಹ್ನ 3.25ರ ಸಮಯದಲ್ಲಿ ಗೌರಿ ಶಂಕರ್ ಬಿನ್ ಶಿವಣ್ಣ(ಚಾಸಾ 1),45 ವರ್ಷ , ವಾಸಃ ಜುಟ್ಟನಹಳ್ಳಿ ರವರು ದಿನಾಂಕ 28.08.2022 ರಂದು 2.30 ಗಂಟೆಗೆ ಶಿವಣ್ಣ ಮತ್ತು ಇತರರು ಹಲ್ಲೆ ಮಾಡಿರುತ್ತಾರೆ ಎಂಬ ಸಂಬಂಧ ತಾವೆ ಚಿಕಿತ್ಸೆಗಾಗಿ ಬಂದಿದ್ದು, ಸದರಿಯವರನ್ನು ವೈದ್ಯಕೀಯ ತಪಾಸಣೆ ಮಾಡಿದಾಗ ಈ ಕೆಳಕಂಡ ಗಾಯಗಳು ಕಂಡು ಬಂದಿರುತ್ತದೆ. ಸದರಿಯ 1. lower lip abrassion 1X 0.5 c.m.

2. Bilatural mostril bleading

ನನ್ನ ಅಭಿಪ್ರಾಯದಲ್ಲಿ ಮೇಲೆ ಹೇಳಿದ ಗಾಯಗಳು ಸಾಮಾನ್ಯ ಸ್ವರೂಪದ ಗಾಯಗಳಾಗಿರುತ್ತವೆ. ಈಗ ಸಾಕ್ಷಿಗೆ ಗಾಯದ ಪ್ರಮಾಣಪತ್ರವನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಗಾಯದ ಪ್ರಮಾಣಪತ್ರವನ್ನು ನಿಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ಸದರಿ ಗಾಯದ ಪ್ರಮಾಣಪತ್ರದಲ್ಲಿ ನಮೂದಿಸಿರುವ ಗಾಯಗಳು ದೊಣ್ಣೆಯಿಂದ ಮತ್ತು ಕಲ್ಲಿನಿಂದ ಹೊಡೆದರೆ ಆಗುವ ಸಾಧ್ಯತೆ ಇರುತ್ತದೆ.

**ಪಾಟೀ ಸವಾಲು** ಃ- **ಶ್ರೀ. ಆರ್ ಎಸ್ .** ವಕೀಲರಿಂದ **ಆರೋಪಿಗಳ** ಪರವಾಗಿ ಃ-

ನಿಪಿ-3 ರಲ್ಲಿ ಎಷ್ಟು ಗಂಟೆಯಿಂದ ಎಷ್ಟು ಗಂಟೆಯವರೆಗೆ ಚಿಕಿತ್ಸೆ ನೀಡಿರುತ್ತೀರಿ ಎಂದು ಬರೆದಿರುವುದಿಲ್ಲ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಸಾಮಾನ್ಯವಾಗಿ ಒಬ್ಬ ವ್ಯಕ್ತಿಯು ಗಟ್ಟಿಯಾದ ನೆಲದ ಮೇಲೆ ಬಿದ್ದರೆ ಸದರಿ ನಿಪಿ-3 ರಲ್ಲಿ ನಮೂದಿಸಿರುವ ಗಾಯದ ಸ್ವರೂಪಗಳು ಆಗುವ ಸಾಧ್ಯತೆ ಇದೆ ಎಂದರೆ ಸಾಕ್ಷಿ ಹೌದು ಎಂದು ನುಡಿಯುತ್ತಾರೆ. ಚಾಸಾ 1 ರವರ ಕೋರಿಕೆಯ ಮೇರೆಗೆ ಸುಳ್ಳು ಗಾಯದ ಪ್ರಮಾಣಪತ್ರವನ್ನು ನೀಡಿರುತ್ತೀರಿ ಎಂದರೆ ಸಾಕ್ಷಿ ಸುಳ್ಳು ಎಂದು ನುಡಿಯುತ್ತಾರೆ.

**ಮರು ವಿಚಾರಣೆ ಃ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಪ್ರ. ನ್ಯಾ . ದಂ. ಮತ್ತು ಜೆ. ಎಂ. ಎಫ್. ಸಿ. ಮಾಗಡಿ.**